**ಕರ್ನಾಟಕ ಸರ್ಕಾರ**

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಡಿಟಿಇ/01/ಇಎಸಟಿ/9/2023

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001
ದಿನಾಂಕ; 05-08-2023

**ಸುತ್ತೋಲೆ**

ವಿಷಯ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಸರ್ಕಾರಿ ಇಂಜಿನಿಯರಿಂಗ್/ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ಅನಧಿಕೃತ ಗೈರು ಹಾಜರಾತಿ ಕುರಿತು ಮಾಹಿತಿ ಒದಗಿಸುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಸರ್ಕಾರಿ ಇಂಜಿನಿಯರಿಂಗ್ / ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಪ್ರಾಂಶುಪಾಲರು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವೃಂದದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಪೂರ್ವಾನುಮತಿ ಪಡೆಯದೆ ಕಛೇರಿಗೆ ಅನಧಿಕೃತ ಗೈರುಹಾಜರಾಗಿರುವವರ ಬಗ್ಗೆ ಮಾಹಿತಿ ನೀಡುವಂತೆ ಹಾಗೂ ಈವರೆಗೂ ಅನಧಿಕೃತ ಗೈರುಹಾಜರಾಗಿರುವ ಸಿಬ್ಬಂದಿ ಮೇಲೆ ಪ್ರಾಂಶುಪಾಲರ ಹಂತದಲ್ಲಿ ಕೈಗೊಂಡಿರುವ ಕ್ರಮದ ಬಗ್ಗೆ ಸ್ಪಷ್ಟ ಮಾಹಿತಿ/ ದಾಖಲೆಗಳೊಂದಿಗೆ ಸಂಕ್ಷಿಪ್ತವಾದ ಪ್ರಸ್ತಾವನೆಯನ್ನು ದಿನಾಂಕ: 12-08-2023 ರೊಳಗೆ ಆಯುಕ್ತಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆ.

ಜಂಟಿ ನಿರ್ದೇಶಕರು (ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ

5/8/23

ಇವರಿಗೆ:

ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಸಂಸ್ಥೆಯ ಪ್ರಾಂಶುಪಾಲರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.